# ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು

ಸಂಖ್ಯೆ: 1407211 DPI-CPI0C7-3(PLM)/5/2024 ದಿನಾಂಕ:28-05-2024

::ಸುತ್ತೋಲೆ::

ವಿಷಯ: ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ-2009 ಮತ್ತು ಕಾಯ್ದೆಯಡಿ ರೂಪಿಸಲಾದ ನಿಯಮಗಳು-2012 ರಡಿ ರಾಜ್ಯದ ಎಲ್ಲಾ ಖಾಸಗಿ ಶಾಲೆಗಳು (ಇತರೆ ಪಠ್ಯಕ್ರಮ ಒಳಗೊಂಡ ಶಾಲೆಗಳು) ಮಾನ್ಯತೆಯನ್ನು ಪಡೆಯುವ ಬಗ್ಗೆ.

ಉಲ್ಲೇಖ: ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ-2009 ಮತ್ತು ಕಾಯ್ದೆಯಡಿ ರೂಪಿಸಲಾದ ನಿಯಮಗಳು-2012

* * * * *

ಶಿಕ್ಷಣ ಹಕ್ಕು ಕಾಯ್ದೆ-2009 ರ ಸೆಕ್ಷನ್-18ರ ಅಡಿಯಲ್ಲಿ ಎಲ್ಲಾ ಖಾಸಗಿ ಅನುದಾನಿತ ಮತ್ತು ಎಲ್ಲಾ ಪಠ್ಯಕ್ರಮದ ಖಾಸಗಿ ಅನುದಾನರಹಿತ ಶಾಲೆಗಳು ನಿಗದಿಪಡಿಸಿರುವ ಮಾನದಂಡಗಳನ್ನು ಅನುಪಾಲಿಸಿ, ಕರ್ನಾಟಕ ಕಡ್ಡಾಯ ಮತ್ತು ಉಚಿತ ಶಿಕ್ಷಣ ಹಕ್ಕು ನಿಯಮಗಳು-2012 ರ ನಿಯಮ-11 ರಂತೆ ನಿಗದಿಪಡಿಸಿರುವ ನಮೂನೆ-1 (Form-I)ರಲ್ಲಿ ಸ್ವಯಂ ದೃಢೀಕರಣದೊಂದಿಗೆ ಅರ್ಜಿ ಸಲ್ಲಿಸಿ, ಮಾನ್ಯತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ಈ ರೀತಿ ಪಡೆದ ಮಾನ್ಯತೆಯ ಅವಧಿಯು 05 ವರ್ಷಗಳಾಗಿರುತ್ತದೆ. ಯಾವುದೇ ಶಾಲೆಯು ನಿಗದಿಪಡಿಸಿರುವ ಮಾನದಂಡಗಳನ್ನು ಅಥವಾ ಕಾಯ್ದೆಯ ನಿಬಂಧನೆಗಳನ್ನು ಉಲ್ಲಂಘಿಸಿದಲ್ಲಿ (ಕೇಂದ್ರ ಪಠ್ಯಕ್ರಮ ಮಂಡಳಿ ಅಫಿಲೇಷನ್ ನೀಡಿ ಕಾಲಕಾಲಕ್ಕೆ ನವೀಕರಿಸಿಕೊಂಡಿದಾಗ್ಯೂ) ಅಂತಹ ಶಾಲೆಯ ಮಾನ್ಯತೆಯನ್ನು ಹಿಂಪಡೆಯುವ ಕ್ರಮದ ಬಗ್ಗೆ ಸೆಕ್ಷನ್-18(3) ಮತ್ತು ನಿಯಮ-12 ರಲ್ಲಿ ಸ್ಪಷ್ಟ ನಿರ್ದೇಶನ ನೀಡಲಾಗಿರುತ್ತದೆ. ಯಾವುದೇ ಶಾಲೆಯು ಮಾನ್ಯತೆ ಪಡೆಯದೇ/ಮಾನ್ಯತೆ ನವೀಕರಿಸದೇ ಶಾಲೆಯನ್ನು ಮುಂದುವರಿಸುತ್ತಿದ್ದಲ್ಲಿ ಅಥವಾ ಮಾನ್ಯತೆಯನ್ನು ಹಿಂಪಡೆದ ನಂತರವೂ ಶಾಲೆಯನ್ನು ಮುಂದುವರೆಸುತ್ತಿದ್ದಲ್ಲಿ ತೆಗೆದುಕೊಳ್ಳಬೇಕಾದ ಕ್ರಮದ ಬಗ್ಗೆ ಸೆಕ್ಷನ್-18(5) ರಲ್ಲಿ ನಿರ್ದೇಶನ ನೀಡಲಾಗಿದೆ.

ಕರ್ನಾಟಕ ಕಡ್ಡಾಯ ಮತ್ತು ಉಚಿತ ಶಿಕ್ಷಣ ಹಕ್ಕು ನಿಯಮಗಳು-2012 ರ ನಿಯಮ-11ರಡಿ ಮಾನ್ಯತೆ ನೀಡಲು ಸಕ್ಷಮ ಪ್ರಾಧಿಕಾರಿ ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಇವರು ಆಗಿದ್ದು, ತಮ್ಮ ವ್ಯಾಪ್ತಿಯ ಎಲ್ಲಾ ಶಾಲೆಗಳು ಕಾಯ್ದೆ ಮತ್ತು ನಿಯಮಾನುಸಾರ ನಿಗದಿತ ನಮೂನೆಯಲ್ಲಿ ಪ್ರಸ್ತಾವನೆ ಸಲ್ಲಿಸಿ ಕಡ್ಡಾಯವಾಗಿ ಮಾನ್ಯತೆ ಪಡೆಯುವ /ಮಾನ್ಯತೆ ನವೀಕರಿಸಿಕೊಳ್ಳುವ ಬಗ್ಗೆ ಅಗತ್ಯ ಕ್ರಮವಹಿಸಲು ಸೂಚಿಸಿದೆ. ಶಿಕ್ಷಣ ಹಕ್ಕು ಕಾಯ್ದೆ ಸೆಕ್ಷನ್-18(5) ರ ಉಲ್ಲಂಘನೆಯ ಪ್ರಕರಣದಲ್ಲಿ ಅಂತಹ ಶಾಲೆಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು ಕರ್ನಾಟಕ ಕಡ್ಡಾಯ ಮತ್ತು ಉಚಿತ ಶಿಕ್ಷಣ ಹಕ್ಕು ನಿಯಮಗಳು-2012 ರ ನಿಯಮ-23 ರಲ್ಲಿ ಸೂಚಿಸಿರುವಂತೆ ಅಗತ್ಯ ಕ್ರಮ ವಹಿಸಲು ಸೂಚಿಸಿದೆ. ನಿಯಮ-11(6) ರಂತೆ ಮಾನ್ಯತೆ ಪಡೆದ ಶಾಲೆಗಳ ಪಟ್ಟಿಯನ್ನು ಉಪನಿರ್ದೇಶಕರು(ಆಡಳಿತ) ರವರು ಸಾರ್ವಜನಿಕರಿಗೆ ಲಭ್ಯವಾಗುವಂತೆ ಪ್ರಕಟಿಸಲು ಸೂಚಿಸಿದೆ.

ತಮ್ಮ ವ್ಯಾಪ್ತಿಯಲ್ಲಿ ಯಾವುದೇ ರಾಜ್ಯ/ಕೇಂದ್ರ ಪಠ್ಯಕ್ರಮದಲ್ಲಿ ನೋಂದಾಯಿತ ಶಾಲೆಯಾಗಿದಾಗ್ಯೂ RTE ಅಡಿ ಮಾನ್ಯತೆ ಪಡೆಯದೇ ಹಾಗೂ ಮಾನ್ಯತೆ ನವೀಕರಿಸದೇ ನಡೆಯುತ್ತಿದ್ದಲ್ಲಿ ಸಂಬಂಧ ಪಟ್ಟ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿಸಲಾಗುವುದು ಎಂದು ತಿಳಿಸಿದೆ.

ಆಯುಕ್ತರು

ಶಾಲಾ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು/ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಖಾಸಗಿ ಶಾಲೆಗಳ ಮುಖ್ಯಸ್ಥರಿಗೆ ಅಗತ್ಯ ಕ್ರಮಕ್ಕಾಗಿ(ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ).

ಪ್ರತಿಯನ್ನು:

1. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ ಇವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.
2. ಕಛೇರಿ ಕಡತಕ್ಕಾಗಿ.